**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** 2020ನೇ ಸಾಲಿನ ಮುಂಗಾರು ಋತುವಿನ ಅಕ್ಟೋಬರ್ ಮಾಹೆಯಲ್ಲಿ ರಾಜ್ಯದ 5 ಜಿಲ್ಲೆಗಳ 7 ತಾಲ್ಲೂಕುಗಳನ್ನು "ಅತಿವೃಷ್ಟಿ/ಪ್ರವಾಹ ಪೀಡಿತ ತಾಲ್ಲೂಕುಗಳು" ಎಂದು ಘೋಷಿಸುವ ಬಗ್ಗೆ.

**ಓದಲಾಗಿದೆ:** 1) ಸರ್ಕಾರಿ ಆದೇಶ ಸಂಖ್ಯೆ: ಕಂಇ 391 ಟಿಎನ್‌ಆರ್ 2020, ದಿ:10-09-2020.
2) ಸರ್ಕಾರಿ ಆದೇಶ ಸಂಖ್ಯೆ: ಕಂಇ 391 ಟಿಎನ್‌ಆರ್ 2020, ದಿ:06-10-2020.

*****

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ದಿನಾಂಕ:10.09.2020ರ ಸರ್ಕಾರದ ಆದೇಶದಲ್ಲಿ 2020ನೇ ಸಾಲಿನ ಮುಂಗಾರು ಋತುವಿನ ಆಗಸ್ಟ ಮಾಹೆಯಲ್ಲಿ ಕರ್ನಾಟಕ ರಾಜ್ಯದಲ್ಲಿ ಬಿದ್ದಂತಹ ಮಹಾ ಮಳೆಗೆ ಹಾಗೂ ಮಹಾರಾಷ್ಟ್ರ ರಾಜ್ಯದಲ್ಲಿನ ಕೃಷ್ಣಾ ಕಣಿವೆ ಜಲಾಶಯಗಳು ತುಂಬಿ ಹರಿದ ನೀರಿನಿಂದ ಹಲವು ಭಾಗಗಳಲ್ಲಿ ಅತಿವೃಷ್ಟಿ/ಪ್ರವಾಹ ಪರಿಸ್ಥಿತಿ ಉಂಟಾಗಿದ್ದು, ರಾಜ್ಯದ 23 ಜಿಲ್ಲೆಗಳ 130 ತಾಲ್ಲೂಕುಗಳನ್ನು "ಅತಿವೃಷ್ಟಿ/ಪ್ರವಾಹ ಪೀಡಿತ ತಾಲ್ಲೂಕುಗಳು" ಎಂದು ಘೋಷಿಸಲಾಗಿದೆ.

ಮೇಲೆ ಓದಲಾದ (2)ರ ದಿನಾಂಕ:06.10.2020ರ ಸರ್ಕಾರದ ಆದೇಶದಲ್ಲಿ 2020ನೇ ಸಾಲಿನ ಮುಂಗಾರು ಋತುವಿನ ಸೆಪ್ಟೆಂಬರ್ ಮಾಹೆಯಲ್ಲಿ ಬಿದ್ದಿರುವ ಭಾರಿ ಮಳೆಯಿಂದ ಉಂಟಾದ "ಅತಿವೃಷ್ಟಿ/ಪ್ರವಾಹದಿಂದ ಅಪಾರ ಪ್ರಮಾಣದಲ್ಲಿ ಮನೆ ಹಾನಿ, ಬೆಳೆಹಾನಿ ಹಾಗೂ ಮೂಲಭೂತ ಸೌಕರ್ಯಗಳು ಹಾನಿಯಾಗಿರುವ ಹಿನ್ನೆಲೆಯಲ್ಲಿ ರಾಜ್ಯದ 16 ಜಿಲ್ಲೆಗಳ 43 ತಾಲ್ಲೂಕುಗಳನ್ನು "ಅತಿವೃಷ್ಟಿ/ಪ್ರವಾಹ ಪೀಡಿತ ತಾಲ್ಲೂಕುಗಳು" ಎಂದು ಘೋಷಿಸಲಾಗಿದೆ.

ಮುಂದುವರೆದು, ಅಕ್ಟೋಬರ್ ಮಾಹೆಯಲ್ಲೂ ಸಹ ರಾಜ್ಯಾದ್ಯಂತ ಬಿದ್ದಂತಹ ಭಾರಿ ಮಳೆಯಿಂದ ಪ್ರವಾಹ ಪರಿಸ್ಥಿತಿ ಉಂಟಾಗಿದ್ದು, ಅಪಾರ ಪ್ರಮಾಣದಲ್ಲಿ ಮನೆ ಹಾನಿ, ಬೆಳೆ ಹಾನಿ ಹಾಗೂ ಸಾರ್ವಜನಿಕ ಮೂಲ ಸೌಕರ್ಯಗಳು ಹಾನಿಯಾಗಿರುತ್ತದೆ. ಈ ಬಗ್ಗೆ ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಅಕ್ಟೋಬರ್ ಮಾಹೆಯಲ್ಲಿ ಬಿದ್ದ ಭಾರಿ ಮಳೆಯಿಂದ ಉಂಟಾದ ಹಾನಿಯ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಸದರಿ ವರದಿಯನ್ನು ಸರ್ಕಾರದಲ್ಲಿ ಪರಾಮರ್ಶಿಸಿ ಈಗಾಗಲೇ ಆಗಸ್ಟ ಮತ್ತು ಸೆಪ್ಟೆಂಬರ್ ಮಾಹೆಯಲ್ಲಿ "ಅತಿವೃಷ್ಟಿ/ಪ್ರವಾಹ ಪೀಡಿತ ತಾಲ್ಲೂಕುಗಳು" ಎಂದು ಘೋಷಿಸಲಾದ ರಾಜ್ಯದ 25 ಜಿಲ್ಲೆಗಳ 173 ತಾಲ್ಲೂಕುಗಳ ಜೊತೆಗೆ ಪ್ರಸ್ತುತ ಅಕ್ಟೋಬರ್ ಮಾಹೆಯಲ್ಲಿ ರಾಜ್ಯದ 05 ಜಿಲ್ಲೆಗಳ 07 ತಾಲ್ಲೂಕುಗಳನ್ನು "ಅತಿವೃಷ್ಟಿ/ಪ್ರವಾಹ ಪೀಡಿತ ತಾಲ್ಲೂಕುಗಳು" ಎಂದು ಘೋಷಿಸಲು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ:

**ಸರ್ಕಾರದ ಆದೇಶ ಸಂಖ್ಯೆ: ಕಂಇ 391 ಟಿಎನ್‌ಆರ್ 2020; ಬೆಂಗಳೂರು, ದಿನಾಂಕ:03-11-2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2020ನೇ ಸಾಲಿನ ಮುಂಗಾರು ಋತುವಿನ ಅಕ್ಟೋಬರ್ ಮಾಹೆಯಲ್ಲಿ ಬಿದ್ದಿರುವ ಭಾರಿ ಮಳೆಯಿಂದ ಉಂಟಾಗಿರುವ "ಅತಿವೃಷ್ಟಿ/ಪ್ರವಾಹದಿಂದ ಅಪಾರ ಪ್ರಮಾಣದಲ್ಲಿ ಮನೆ ಹಾನಿ, ಬೆಳೆಹಾನಿ ಹಾಗೂ ಮೂಲ ಸೌಕರ್ಯಗಳು ಹಾನಿಯಾಗಿರುವ ಹಿನ್ನೆಲೆಯಲ್ಲಿ ರಾಜ್ಯದ ಈ ಕೆಳಕಂಡ **05 ಜಿಲ್ಲೆಗಳ 07 ತಾಲ್ಲೂಕುಗಳನ್ನು** ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ **"ಅತಿವೃಷ್ಟಿ/ಪ್ರವಾಹ ಪೀಡಿತ ತಾಲ್ಲೂಕುಗಳು"** ಎಂದು ಘೋಷಿಸಲಾಗಿದೆ:

| ಕ್ರ.ಸಂ. | ಜಿಲ್ಲೆ | ಕ್ರ.ಸಂ. | ತಾಲ್ಲೂಕು |
|---|---|---|---|
| 1 | ವಿಜಯಪುರ | 1 | ತಿಕೋಟ |
| | | 2 | ಚಡಚಣ |
| 2 | ಯಾದಗಿರಿ | 3 | ಗುರುಮಿಟ್ಕಲ್ |
| 3 | ಬಳ್ಳಾರಿ | 4 | ಕೊಟ್ಟೂರು |
| | | 5 | ಕುರಗೋಡು |
| 4 | ದಾವಣಗೆರೆ | 6 | ದಾವಣಗೆರೆ |
| 5 | ದಕ್ಷಿಣ ಕನ್ನಡ | 7 | ಸುಳ್ಯ |

...2

"ಅತಿವೃಷ್ಟಿ/ಪ್ರವಾಹ ಪೀಡಿತ ತಾಲ್ಲೂಕುಗಳು" ಎಂದು ಘೋಷಿಸಿದ ತಾಲ್ಲೂಕುಗಳಲ್ಲಿ SDRF/NDRF ಮಾರ್ಗಸೂಚಿ ಪ್ರಕಾರ ಹಾಗೂ ಪರಿಹಾರ ಕಾರ್ಯಗಳಿಗೆ ಸರ್ಕಾರದಿಂದ ಕಾಲ-ಕಾಲಕ್ಕೆ ಹೊರಡಿಸಲಾದ ಸರ್ಕಾರದ ಆದೇಶ / ಸುತ್ತೋಲೆಗಳಲ್ಲಿನ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ, ಜಿಲ್ಲಾಡಳಿತವು ಅಗತ್ಯ ಪರಿಹಾರ ಕಾರ್ಯಗಳನ್ನು ಕೈಗೊಳ್ಳಲು ಸರ್ಕಾರವು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಕೆ. ಉಮಾಪತಿ)** 3/11
ಸರ್ಕಾರದ ಅಪರ ಕಾರ್ಯದರ್ಶಿ
ಕಂದಾಯ ಇಲಾಖೆ
(ವಿಪತ್ತು ನಿರ್ವಹಣೆ ಮತ್ತು ನೋಂ & ಮು.)

3/11/2020

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ವಿಕಾಸಸೌಧ, ಬೆಂಗಳೂರು - ಇ-ಗೆಜೆಟ್‌ನಲ್ಲಿ ಕೂಡಲೇ ಪ್ರಕಟಿಸುವಂತೆ ಕೋರಿದೆ.

**ಪ್ರತಿ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳು.
3. ಪ್ರಾದೇಶಿಕ ಆಯುಕ್ತರು, ಬೆಂಗಳೂರು / ಮೈಸೂರು / ಕಲಬುರಗಿ ಮತ್ತು ಬೆಳಗಾವಿ ವಿಭಾಗ.
4. ಜಿಲ್ಲಾಧಿಕಾರಿಗಳು, ವಿಜಯಪುರ, ಯಾದಗಿರಿ, ಬಳ್ಳಾರಿ, ದಾವಣಗೆರೆ ಮತ್ತು ದಕ್ಷಿಣ ಕನ್ನಡ ಜಿಲ್ಲೆ. (05 ಜಿಲ್ಲೆಗಳು)
5. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು, ವಿಜಯಪುರ, ಯಾದಗಿರಿ, ಬಳ್ಳಾರಿ, ದಾವಣಗೆರೆ ಮತ್ತು ದಕ್ಷಿಣ ಕನ್ನಡ ಜಿಲ್ಲೆ. (05 ಜಿಲ್ಲೆಗಳು)
6. ವ್ಯವಸ್ಥಾಪಕ ನಿರ್ದೇಶಕರು, GESCOM, ಗುಲ್ಬರ್ಗಾ-585 102.
7. ವ್ಯವಸ್ಥಾಪಕ ನಿರ್ದೇಶಕರು, HESCOM, ಹುಬ್ಬಳ್ಳಿ– 580 025.
8. ವ್ಯವಸ್ಥಾಪಕ ನಿರ್ದೇಶಕರು, MESCOM, ಮಂಗಳೂರು-577 201.
9. ಆಯುಕ್ತರು, ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ, ಕಂದಾಯ ಇಲಾಖೆ, ಬೆಂಗಳೂರು.
10. ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
11. ಆಯುಕ್ತರು ಪಶುಸಂಗೋಪನೆ ಮತ್ತು ಪಶು ವೈದ್ಯಕೀಯ ಸೇವೆಗಳ ಇಲಾಖೆ, ಬೆಂಗಳೂರು.
12. ನಿರ್ದೇಶಕರು, ತೋಟಗಾರಿಕೆ ಇಲಾಖೆ, ಲಾಲ್‌ಬಾಗ್, ಬೆಂಗಳೂರು.
13. ನಿರ್ದೇಶಕರು, ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ, ಅಟ್ಟೂರು ಬಡಾವಣೆ, ಬೆಂಗಳೂರು.
14. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
15. ಉಪ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
16. ಉಪ ನಿರ್ದೇಶಕರು, ಖಜಾನೆ ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಖನಿಜ ಭವನ, ಬೆಂಗಳೂರು.
17. ಜಿಲ್ಲಾ ಖಜಾನಾಧಿಕಾರಿಗಳು, ವಿಜಯಪುರ, ಯಾದಗಿರಿ, ಬಳ್ಳಾರಿ, ದಾವಣಗೆರೆ ಮತ್ತು ದಕ್ಷಿಣ ಕನ್ನಡ ಜಿಲ್ಲೆ. (05 ಜಿಲ್ಲೆಗಳು)
18. ಮಾನ್ಯ ಮುಖ್ಯ ಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.

...3

19. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
20. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
21. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
22. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ) ರವರ ಆಪ್ತ ಕಾರ್ಯದರ್ಶಿ.
23. ಸರ್ಕಾರದ ಅಪರ ಕಾರ್ಯದರ್ಶಿ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ) ರವರ ಆಪ್ತ ಸಹಾಯಕರು.
24. ಸಮಾವೇಶಕರು, ರಾಜ್ಯಮಟ್ಟದ ಬ್ಯಾಂಕರುಗಳ ಸಮಿತಿ (SLBC), ಬೆಂಗಳೂರು.
25. ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ), ಲೆಕ್ಕಪತ್ರ ಶಾಖೆ.
26. ಶಾಖಾ ರಕ್ಷಾ ಕಡತ.